ತುಮಕೂರಿನಲ್ಲಿ ಹರಿಜನ ಬಾಲಿಕಾ ಕಾಲೇಜು ವಿದ್ಯಾರ್ಥಿನಿಲಯದ ಬಗ್ಗೆ.

೧೭೦೯. ಶ್ರೀ ಸಿ. ಎನ್. ಭಾಸ್ಕರಪ್ಪ (ಬೆಳ್ಳಾವಿ).— ಮಾನ್ಯ ಸಮಾಜ ಕಲ್ಯಾಣ ಸಚಿವರು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ತುಮಕೂರಿನಲ್ಲಿ ನಿರ್ಮಿಸಲು ಯೋಜಿಸಲಾಗಿರುವ ಹರಿಜನ ಬಾಲಿಕಾ ಕಾಲೇಜು ವಿದ್ಯಾರ್ಥಿನಿಲಯ ನಿರ್ಮಾಣ ಸ್ಥಗಿತವಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ? ಈ ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ ! ಹಾಗೂ ಸ್ಥಗಿತಗೊಂಡಿರುವುದಕ್ಕೆ ಕಾರಣಗಳೇನು ?

ಶ್ರೀ ವಿ. ಎಲ್. ಪಾಟೀಲ್ (ಸಮಾಜ ಕಲ್ಯಾಣ ಸಚಿವರು).—

ಅ) ಈ ಕಟ್ಟಡದ ಕೆಲಸ ಮಂಜೂರಾಗಿರುವುದಿಲ್ಲ. ಹಣದ ಕೊರತೆಯಿಂದಾಗಿ ಯಾವುದೇ ಹೊಸ ಕಟ್ಟಡದ ಕೆಲಸವನ್ನು ೧೯೮೫–೮೬ನೇ ಸಾಲಿನಲ್ಲಿ ತೆಗೆದುಕೊಂಡಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ನೀಡಲಾದ ಉತ್ತರಗಳು.

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಸಚಿವರು).— ಮಾನ್ಯ ಅಧ್ಯಕ್ಷರೆ, ಸಿರಿ ನೆಯ ಪಟ್ಟಿಯನ್ನು ಸಭೆಯ ಮುಂದಿಡುತ್ತಿದ್ದೇನೆ.

ಅಧ್ಯಕ್ಷರು.— ಸದರಿ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸಲಾಯಿತು.

ಲೋಕೋಪಯೋಗಿ ಇಲಾಖೆಯಲ್ಲಿ ದುಡಿಯುತ್ತಿರುವ ದಿನಗೂಲಿಗಳು.

ಳ್ಳಿ. ಆರ್. ಎಸ್. ನಾಯಕ್. (ಘಟಕಳ) — ಮಾನ್ಯ ಲೋಕೋಪಯೋಗಿ ಹಾಗೂ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಲೋಕೋಪಯೋಗಿ ಹಾಗೂ ನೀರಾವರಿ ಖಾತೆಗಳಲ್ಲಿ ದುಡಿಯುತ್ತಿರುವ ದಿನಗೂಲಿಗಳ ಸಂಖ್ಯೆ ಎಷ್ಟು ? ಶ್ರೇಷ್ಠ ನ್ಯಾಯಾಲಯದ ಆದೇಶದ ಪ್ರಕಾರ ಕೆಲಸಕ್ಕೆ ಸೇರಿದ ದಿನಾಂಕದಿಂದ ನಂತರ ಯಾವ ದಿನಾಂಕದಂದು ತೆಗೆಯಲ್ಪಟ್ಟವರನ್ನು ಕೆಲಸಕ್ಕೆ ಸೇರಿಸಿಕೊಳ್ಳಲಾಗಿದೆ?

ಆ) ಶ್ರೇಷ್ಠ ನ್ಯಾಯಾಲಯದ ಆದೇಶದ ಪ್ರಕಾರ ಕೆಲಸ ಪಡೆದವರ ಸಂಖ್ಯೆ ಎಷ್ಟು ?

ಶ್ರೀ ಪೆಚ್. ಡಿ. ದೇವೇಗೌಡರು, (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ೨೪,೩೭೬. ಶ್ರೇಷ್ಠ ನ್ಯಾಯಾಲಯದ ಆದೇಶದ ಪ್ರಕಾರ ೨೫–೭–೧೯೮೫ ರಂದು ಕೆಲಸದಲ್ಲಿ ಇದ್ದು ನಂತರ ತೆಗೆದುಹಾಕಲ್ಪಟ್ಟ ಎಲ್ಲಾ ದಿನಗೂಲಿ ನೌಕರರನ್ನು ಕೆಲಸಕ್ಕೆ ಸೇರಿಸಿಕೊಳ್ಳಲಾಗುವುದು.

ಆ) ೨೯–೧೦–೧೯೮೬ರ ತನಕ ೪,೧೯೦ ದಿನಗೂಲಿ ನೌಕರರ ಶ್ರೇಷ್ಠ ನ್ಯಾಯಾಲಯದ ಆದೇಶದ ಪ್ರಕಾರ ಕೆಲಸ ಪಡೆದಿರುವರು. ಇದಲ್ಲದೇ ಇನ್ನೂ ೧೯೬ ಮಂದಿ ನೌಕರರು ಸರ್ವೋಚ್ಚ ನ್ಯಾಯಾಲಯದ ಆದೇಶದ ಪ್ರಕಾರ ನೌಕರಿಗೆ ಅರ್ಹರಿದ್ದರೂ ಕಾರಣಾಂತರಗಳಿಂದಾಗಿ ಕೊನೆಯ ದಿನಾಂಕವಾದ ೨೯–೧೦–೧೯೮೬ರೊಳಗೆ ಕೆಲಸಕ್ಕೆ ವಾಪಸ್ ತೆಗೆದುಕೊಳ್ಳಲಾಗಿಲ್ಲ. ಇವರಲ್ಲಿ ೧೨೭ ಮಂದಿ ಲೋಕೋಪಯೋಗಿ ಮತ್ತು ನೀರಾವರಿ ಇಲಾಖೆಗೆ ಸೇರಿದವರು. ಸರ್ವೋಚ್ಚ ನ್ಯಾಯಾಲಯವು ಈ ನೌಕರರನ್ನು ಕೆಲಸಕ್ಕೆ ತೆಗೆದುಕೊಳ್ಳಲು ೭–೩–೧೯೮೬ರ ತನಕ ಸಮಯ ವಿಸ್ತರಿಸಿರುವುದರಿಂದ ಈ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಕುಂದಾಪುರ ಕ್ಷೇತ್ರದ ಉಡುಪಿ ತಾಲ್ಲೂಕಿನ ಕಕ್ಕುಂಡಿ ಗ್ರಾಮದಿಂದ ಹಾದು ಹೋಗುವ ಪಿ. ಡಬ್ಲ್ಯೂ. ಡಿ. ರಸ್ತೆಯಲ್ಲಿರುವ ಸೇತುವೆ ಕಟ್ಟಡ ಕುರಿತು.

೭೮೦. ಶ್ರೀ ಕೆ ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ).— ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕುಂದಾಪುರ ಕ್ಷೇತ್ರದ ಉಡುಪಿ ತಾಲ್ಲೂಕಿನ ಕಕ್ಕುಂಡೆ ಗ್ರಾಮದಿಂದ ಹಾದು ಹೋಗುವ ಲೋಕೋಪಯೋಗಿ ಇಲಾಖೆಯ ರಸ್ತೆಯಲ್ಲಿರುವ ಸೇತುವೆ ಕುಸಿದಿರುವುದು ಹಾಗೂ ಇದರಿಂದ ವಾಹನ ಸಂಚಾರಕ್ಕೆ ತಡೆ ಉಂಟಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ?

ಆ) ಈ ಸಮಸ್ಯೆಯನ್ನು ಬಗೆಹರಿಸಲು ತುರ್ತು ಕ್ರಮ ಕೈಗೊಳ್ಳುವ ಯೋಜನೆ ಸರಕಾರದವರ ಮುಂದಿದೆಯೆ ?

ಶ್ರೀ ಹೆಚ್. ಡಿ. ದೇವೇಗೌಡ, (ಲೋಕೋಪಯೋಗಿ ಮತ್ತು ನೀರಾವರಿ ಸಚಿವರು).—

ಆ) ಸೇತುವೆಯು ಕುಸಿದಿಲ್ಲ. ಈ ಸೇತುವೆಯು ಸುಮಾರು ಐವತ್ತು ವರ್ಷಕ್ಕಿಂತಲೂ ಹಳೆಯದಾಗಿದ್ದು ಜೀರ್ಣಾವಸ್ಥೆಯಲ್ಲಿ ಇರುವುದರಿಂದ ವಾಹನ ಸಂಚಾರವನ್ನು ನಿಯಂತ್ರಿಸಲಾಗಿದೆ.

ಆ) ಈ ಸೇತುವೆ ನಿರ್ಮಾಣವನ್ನು ಹಣಕಾಸಿನ ಲಭ್ಯತೆಯನ್ನಾಧರಿಸಿ, ಆದ್ಯತೆಗಳಿಗನುಗುಣವಾಗಿ ಬರುವ ವರ್ಷಗಳಲ್ಲಿ ತೆಗೆದುಕೊಳ್ಳುವುದನ್ನು ಪರಿಶೀಲಿಸಲಾಗುವುದು.

ಡಿ. ಎಫ್. ಜಿ. ಭದ್ರಾವತಿ ಇವರು ಕಳುಹಿಸಿರುವ ಅಸಮರ್ಥ ಸರಕಾರಿ ನೌಕರರನ್ನು ಕೆಲಸದಿಂದ ತೆಗೆಯಲು ಕಳುಹಿಸಿರುವ ಪಟ್ಟಿಯ ಬಗ್ಗೆ.

೨೭೨. ಶ್ರೀ ಬಿ. ಎಸ್. ಯಡಿಯೂರಪ್ಪ (ಶಿಕಾರಿಪುರ).— ಅರಣ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಭದ್ರಾವತಿ ವಿಭಾಗದ ಅರಣ್ಯಾಧಿಕಾರಿಗಳ ಕಛೇರಿಯಿಂದ ಅಸಮರ್ಥ ಅಧಿಕಾರಿಗಳನ್ನು ಸರ್ಕಾರಿ ಸುತ್ತೋಲೆಯ ಮೇರೆಗೆ ಕಡ್ಡಾಯವಾಗಿ ನಿವೃತ್ತಿಗೊಳಿಸಲು ಹೆಸರನ್ನು ಸೂಚಿಸಿ ಪಟ್ಟಿ ಬಂದಿದೆಯೆ ?

ಆ) ಹಾಗಿದ್ದಲ್ಲಿ ಈ ರೀತಿ ಕಳಿಸಿರುವ ಸುತ್ತೋಲೆಯಲ್ಲಿ ಜಿಲ್ಲಾ ಅರಣ್ಯಾಧಿಕಾರಿಯವರು ವೈಯುಕ್ತಿಕ ದ್ವೇಷದಿಂದ ಕೆಲವು ಅಧಿಕಾರಿಗಳ ಹೆಸರನ್ನು ಶಿಫಾರಸ್ಸು ಮಾಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ ಆ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮವೇನು ?

ಶ್ರೀ ಬಿ. ವಿ. ಜೀವಿಜಯ, (ಮಾನ್ಯ ಅರಣ್ಯ ಸಚಿವರು).—

ಅ) ಇಲ್ಲ. ಸರ್ಕಾರದ ಆದೇಶ ಸಂಖ್ಯೆ. ಡಿಪಿಎಆರ್ ೧೨ ಎಸ್‌ಡಿಇ ೮೫ ದಿನಾಂಕ ೨೪-೫-೮೫ರ ಅನುಸಾರವಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಭದ್ರಾವತಿ ವಿಭಾಗ ಇವರು ೨೫ ವರ್ಷ ಅರ್ಹತಾದಾಯಕ ಸೇವೆಯನ್ನು ಸಲ್ಲಿಸಿದವರ ಅಥವಾ ೫೦ ವರ್ಷ ತುಂಬಿದ ಸರ್ಕಾರಿ ನೌಕರರ ಪಟ್ಟಿಯನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಾಮಾನ್ಯ), ಅವರಿಗೆ ಕಳುಹಿಸಿರುತ್ತಾರೆ.

ಆ) ಇಲ್ಲ.

ಇ) ಈ ಪ್ರಶ್ನೆಯು ಉದ್ಭವಿಸುವುದಿಲ್ಲ.

ಹೊನ್ನಾಳಿ ತಾಲ್ಲೂಕಿನ ಜೀವನಹಳ್ಳಿಯಲ್ಲೊಂದು ಸಾರ್ವಜನಿಕ ವಿದ್ಯಾರ್ಥಿ ನಿಲಯ ತೆರೆಯುವ ಬಗ್ಗೆ.

೨೩೦. ಶ್ರೀ ಡಿ. ಜಿ. ಬಸವನಗೌಡ (ಹೊನ್ನಾಳಿ).— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹೊನ್ನಾಳಿ ತಾಲ್ಲೂಕು ಜೀವನಹಳ್ಳಿಯಲ್ಲೊಂದು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಸಾರ್ವಜನಿಕರ ವಿದ್ಯಾರ್ಥಿ ನಿಲಯವನ್ನು ತೆಗೆಯುವ ಆಲೋಚನೆ ಸರ್ಕಾರದವರಿಗೆ ಇದೆಯೆ?

ಆ) ಹಾಗಿದ್ದಲ್ಲಿ, ೧೯೮೬-೮೭ನೇ ಸಾಲಿನಿಂದಾದರೂ ಪ್ರಾರಂಭಿಸುವ ಯೋಜನೆ ಸರ್ಕಾರದ ಪರಿಗಿದೆಯೆ ?

ಶ್ರೀ ವಿ. ಎಲ್. ಪಾಟೀಲ್, (ಸಮಾಜ ಕಲ್ಯಾಣ ಸಚಿವರು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.